Karnatak Law Society's
**Vishwanathrao Deshpande Institute of Technology**
**(Approved by AICTE, New Delhi. Affiliated to VTU, Belagavi)**
**(Recognised Under Section 2(f) by UGC, New Delhi)**
Udyog Vidya Nagar, Haliyal – 581329, Dist: Uttar Kannada (Karnataka)
Phone: 08284-220861, 220334, 221409, Fax: 08284-220813
www.klsvdit.edu.in principal@klsvdit.edu.in

KLS/VDIT/ 806/2021-22 Date: 14-03-2022

**ಪತ್ರಿಕಾ ಪ್ರಕಟಣೆ:**

## ಪ್ರೊ.ಸಂಗೀತಾ ಬೆಣ್ಣೆ ಅವರಿಗೆ ಪಿ.ಎಚ್.ಡಿ ಪ್ರದಾನ

ಕರ್ನಾಟಕ ಲಾ ಸೊಸೈಟಿಯ ವಿಶ್ವನಾಥರಾವ್ ದೇಶಪಾಂಡೆ ತಾಂತ್ರಿಕ ಮಹಾವಿದ್ಯಾಲಯ ಹಳಿಯಾಳದ ರಸಾಯನ ಶಾಸ್ತ್ರ ವಿಭಾಗದಲ್ಲಿ ಸಂಶೋಧನೆ ಕೈಗೊಂಡಿದ್ದ ಸಂಗೀತಾ ಬೆಣ್ಣಿ ಅವರು ಮಂಡಿಸಿದ 'ಪ್ರೊಡಕ್ಷನ್ ಆಫ್ ಬಯೋಡೀಸೆಲ್ ಫ್ರಾಮ್ ನಾನ್ ಎಡಿಬಲ್ ಸೀಡ್ ಆಯ್ಲ್ ಎಂಡ್ ಕ್ಯಾರೆಕ್ಟರೈಝೇಶನ್' ಎಂಬ ಮಹಾ ಪ್ರಬಂಧಕ್ಕೆ ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯ (ವಿ.ತಾ.ವಿ) ಡಾಕ್ಟರೇಟ್ ಪದವಿ ಪ್ರದಾನ ಮಾಡಿದೆ. ಮಾರ್ಚ್ 10 ರಂದು ನಡೆದ ವಿಶ್ವವಿದ್ಯಾಲಯ ಘಟಿಕೋತ್ಸವ ಸಮಾರಂಭದಲ್ಲಿ ವಿ.ತಾ.ವಿ ಉಪಕುಲಪತಿಗಳಾದ ಡಾ. ಕರಿಸಿದ್ದಪ್ಪ, ಶೈಕ್ಷಣಿಕ ಕುಲಸಚಿವರಾದ ಡಾ. ಎ. ಎಸ್. ದೇಶಪಾಂಡೆ ಮತ್ತು ಮೌಲ್ಯಮಾಪನ ಕುಲಸಚಿವರಾದ ಡಾ. ಬಿ. ಇ. ರಂಗಸ್ವಾಮಿ ಅವರ ಉಪಸ್ಥಿತಿಯಲ್ಲಿ ಪದವಿ ಪ್ರದಾನ ಮಾಡಲಾಯಿತು.

ಮಹಾವಿದ್ಯಾಲಯದ ರಸಾಯನ ಶಾಸ್ತ್ರ ವಿಭಾಗ ಮುಖ್ಯಸ್ಥರಾದ ಡಾ. ರವೀಂದ್ರ ಎಸ್ ಮುನ್ನೊಳ್ಳಿ ಈ ಸಂಶೋಧನಾ ಕಾರ್ಯದಲ್ಲಿ ಮಾರ್ಗದರ್ಶನ ನೀಡಿದ್ದರು. 2014 ರಿಂದ ಮೂರು ವರ್ಷಗಳ ಕಾಲ ಮಹಾವಿದ್ಯಾಲಯದ ರಸಾಯನ ಶಾಸ್ತ್ರ ವಿಭಾಗದಲ್ಲಿ ಉಪನ್ಯಾಸಕರಾಗಿ ಸೇವೆ ಸಲ್ಲಿಸಿದ ದಾಂಡೇಲಿ ಮೂಲದ ಸಂಗೀತಾ ಬೆಣ್ಣಿ ಅವರು ಪ್ರಸ್ತುತ ಪುಣೆಯ ಪಾರ್ವತಿಬಾಯಿ ಗೆನ್ಬಾ ಇಂಜನಿಯರಿಂಗ್ ಕಾಲೇಜಿನಲ್ಲಿ ಸೇವೆ ಸಲ್ಲಿಸುತ್ತಿದ್ದಾರೆ.

ಈ ಸಾಧನೆಗೆ ಮಹಾವಿದ್ಯಾಲಯದ ಆಡಳಿತ ಮಂಡಳಿ ಅಧ್ಯಕ್ಷರಾದ ಶ್ರೀ. ವಿನಾಯಕ ಲೋಕುರ್, ಪ್ರಾಂಶುಪಾಲರಾದ ಡಾ. ವಿ ಎ ಕುಲಕರ್ಣಿ, ಡಾ. ಮಹೇಂದ್ರ ದೀಕ್ಷಿತ್ ಮತ್ತು ಸಿಬ್ಬಂದಿ ವರ್ಗದವರು ಶ್ಲಾಘನೆ ವ್ಯಕ್ತಪಡಿಸಿದ್ದಾರೆ.

ಪ್ರಾಂಶುಪಾಲರು

Principal
KLS Vishwanathrao Deshpande
Institute of Technology, Haliyal


TU
BELAGAVI
TU
BELAGAVI